ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ **2110/2025**

ಪಿರ್ಯಾದಿ : ಶ್ರೀ ಎ.ಇಸ್ಮಾಯಿಲ್,
ವಯಸ್ಸು ಸುಮಾರು 47 ವರ್ಷ,
ಬಿನ್ ಎಸ್.ಕೆ.ಅಬ್ದುಲ್ಲಾ,
ವಾಸಃ ಇಂದಿರಾ ನಗರ,
ಬಿಳಗುಳ ಗ್ರಾಮ, ಕಸಬಾ ಹೋಬಳಿ,
ಮೂಡಿಗೆರೆ ತಾಲ್ಲೂಕು.

ವಿರುದ್ಧ

ಆರೋಪಿ : ಶ್ರೀ ಸಿದ್ದಿಕ್,
ವಯಸ್ಸು ಸುಮಾರು 44 ವರ್ಷ,
ಬಿನ್ ವಿ.ಅಹಮ್ಮದ್,
ವಾಸಃ ಪೆಟ್ರೋಲ್ ಬಂಕ್ ಹತ್ತಿರ,
ಮುಸಾಹಿರ್ ಆಸಿಫ್ ಬಿಲ್ಡಿಂಗ್,
ಕೆ.ಎಂ ರಸ್ತೆ, ಮೂಡಿಗೆರೆ.

ಆಪಾದನೆಯ ಸಾರಾಂಶ

ಶ್ರೀಮತಿ ಸುರಕ್ಷ ಕೆ.ಕೆ., C/C ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರನ್ನು ಜನವರಿ 2024 ನೇ ಸಾಲಿನಲ್ಲಿ, ನಿಮ್ಮ ಕುಟುಂಬದ ಅವಶ್ಯಕತೆಗಾಗಿ ಅವರಿಂದ 4,00,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಆಲ್ದೂರು ಶಾಖೆಯ ಚೆಕ್ ಸಂಖ್ಯೆ 503925, ದಿನಾಂಕ 13.06.2025, ರೂ.4,00,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಬ್ಯಾಂಕ್ ಆಫ್ ಬರೋಡಾ, ಬಿಳಗುಳ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲ (Funds insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 30.06.2025 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರ: 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರ:

ಪ್ರ: 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರ:

**Additional preliminary enquiry as per guidelines issued by Hon'ble Apex Court in; (2025 SCC Online SC 2069) Sanjabij Tari Vs. Kishore S. Borcar and Another**

1. Do you admit that the cheque belongs to your account?

Ans:

2. Do you admit that the signature on the cheque is yours?

Ans:

3. Did you issue the cheque to the complainant?

Ans:

4. Was there an existing liability at the time of issuance?

Ans:

5. What is your defence?

Ans:

6. Do you wish to compound the case at this stage?

Ans:

*(ದಿನಾಂಕ 07.03.2026 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**Sd/-**

ಮೂಡಿಗೆರೆ<br>ದಿನಾಂಕ: 07.03.2026

C/C ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು<br>**ಜೆ.ಎಂ.ಎಫ್.ಸಿ, ಮೂಡಿಗೆರೆ.**